ಯಾರಾದರೂ ಬಲಿಕೊಡಲು (ಕುರ್ಬಾನಿ ಮಾಡಲು) ಪ್ರಾಣಿಯನ್ನು ಹೊಂದಿದ್ದರೆ ಮತ್ತು ದುಲ್-ಹಿಜ್ಜಾ ತಿಂಗಳ ಚಂದ್ರನು ಕಾಣಿಸಿಕೊಂಡರೆ, ಅವನು ಬಲಿ ಕೊಡುವವರೆಗೆ (ಕುರ್ಬಾನಿ ಮಾಡುವವರೆಗೆ) ತನ್ನ ಕೂದಲು ಅಥವಾ ಉಗುರುಗಳಿಂದ ಏನನ್ನೂ ಕತ್ತರಿಸಬಾರದು

ಸತ್ಯವಿಶ್ವಾಸಿಗಳ ಮಾತೆ ಮತ್ತು ಪ್ರವಾದಿಪತ್ನಿಯಾದ ಉಮ್ಮು ಸಲಮ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳುತ್ತಾರೆ: ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಯಾರಾದರೂ ಬಲಿಕೊಡಲು (ಕುರ್ಬಾನಿ ಮಾಡಲು) ಪ್ರಾಣಿಯನ್ನು ಹೊಂದಿದ್ದರೆ ಮತ್ತು ದುಲ್-ಹಿಜ್ಜಾ ತಿಂಗಳ ಚಂದ್ರನು ಕಾಣಿಸಿಕೊಂಡರೆ, ಅವನು ಬಲಿ ಕೊಡುವವರೆಗೆ (ಕುರ್ಬಾನಿ ಮಾಡುವವರೆಗೆ) ತನ್ನ ಕೂದಲು ಅಥವಾ ಉಗುರುಗಳಿಂದ ಏನನ್ನೂ ಕತ್ತರಿಸಬಾರದು."
[صحيح] [رواه مسلم]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ಆದೇಶಿಸುವುದೇನೆಂದರೆ, ಬಲಿ ಕೊಡಲು (ಕುರ್ಬಾನಿ ಮಾಡಲು) ಬಯಸುವವರು ದುಲ್-ಹಿಜ್ಜಾ ತಿಂಗಳ ಚಂದ್ರನು ಕಾಣಿಸಿಕೊಂಡರೆ, ನಂತರ ಬಲಿ ಕೊಡುವವರೆಗೆ ತಮ್ಮ ತಲೆ, ಕಂಕುಳು, ಮೀಸೆ ಅಥವಾ ಇತರ ಭಾಗಗಳ ಕೂದಲು ಅಥವಾ ಕೈ-ಕಾಲುಗಳ ಉಗುರುಗಳಿಂದ ಏನನ್ನೂ ಕತ್ತರಿಸಬಾರದು.

http://sunnah.global/hadeeth/kn/show/8954